# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 957

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 20-08-2025

| | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆಯನ್ನು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವುದು) | ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿಗಳ ಸಂಖ್ಯೆ: 6421/2022 (MV), 14627/2021 (MV), 19869/2021 (MV) ಮತ್ತು 24569/2023 (MV) ಗಳಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 02-04-2025 ರಂದು ಹೊರಡಿಸಿದ ಆದೇಶದಲ್ಲಿ ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆಯನ್ನು ಸ್ಥಗಿತಗೊಳಿಸುವಂತೆ ಆದೇಶಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಮೇಲ್ಕಂಡಂತೆ ಮಾನ್ಯ ಉಚ್ಚ ನ್ಯಾಯಾಲಯದ ಏಕ ಸದಸ್ಯ ಪೀಠವು ದಿನಾಂಕ: 02-04-2025 ರಂದು ಹೊರಡಿಸಿರುವ ಆದೇಶದಿಂದ ಬಾಧಿತರಾಗಿ M/s Uber India Systems Private Limited ಇವರು WA No: 848/2025 (MV), Varikruti Mahendra Reddy ಇವರು WA No: 863/2025 (MV), M/s ANI Technologies Pvt Ltd ಇವರು WA No: 906/2025 (MV), Roppen Transportation Services Pvt. Ltd., ಇವರು WA No: 948/2025 (MV) ಮತ್ತು Bike Taxi Welfare Association WA No: 962/2025 (MV) ಇವರುಗಳು ಮಾನ್ಯ ಉಚ್ಚ ನ್ಯಾಯಾಲಯದ ದ್ವಿ-ಸದಸ್ಯ ಪೀಠದ ಮುಂದೆ ಸರ್ಕಾರದ ವಿರುದ್ಧ ಪ್ರಕರಣಗಳನ್ನು ದಾಖಲಿಸಿರುತ್ತಾರೆ.<br><br>ಪ್ರಸ್ತುತ ಸದರಿ ಪ್ರಕರಣಗಳು ಮಾನ್ಯ ಉಚ್ಚ ನ್ಯಾಯಾಲಯದ ದ್ವಿ-ಸದಸ್ಯ ಪೀಠದ ಮುಂದೆ ವಿಚಾರಣೆಗೆ ಬಾಕಿ ಇರುತ್ತವೆ. |
| ಆ. | ಬೈಕ್ ಟ್ಯಾಕ್ಸಿ ಸೇವೆ ಕುರಿತಂತೆ ಮೋಟಾರು ವಾಹನ ಕಾಯ್ದೆಯಡಿ ನಿಯಮಗಳನ್ನು ರೂಪಿಸುವಂತೆ ಮಾನ್ಯ ಉಚ್ಚ ನ್ಯಾಯಾಲಯವು ಈ ಹಿಂದೆಯೇ ಆದೇಶ ನೀಡಿದ್ದರೂ ನಿಯಮ ರೂಪಿಸದೆ ಇರುವುದಕ್ಕೆ ಕಾರಣವೇನು; ಈ ಬೈಕ್ ಟ್ಯಾಕ್ಸಿ ಸೇವೆಯಿಂದ ತಮ್ಮ ಜೀವನ ನಡೆಸುತ್ತಿದ್ದ ಹಲವಾರು ಜನರು ನಿರುದ್ಯೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನಿರುದ್ಯೋಗಿಗಳಿಗೆ ಸರಕಾರ ಯಾವ ರೀತಿಯ ಪರಿಹಾರ ನೀಡಿದೆ; (ವಿವರ ನೀಡುವುದು) | ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:14.09.2018 ರಂದು ನಡೆದ ಸಭೆಯಲ್ಲಿ ತೀರ್ಮಾನಿಸಿರುವಂತೆ, ಸರ್ಕಾರದ ದಿನಾಂಕ:20.09.2018 ರ ಆದೇಶದಲ್ಲಿ, ಬೆಂಗಳೂರು ನಗರದಲ್ಲಿ ಬೈಕ್ ಟ್ಯಾಕ್ಸಿ ಯೋಜನೆ ಜಾರಿಗೊಳಿಸುವ ಕುರಿತಂತೆ ಸಾಧಕ-ಬಾಧಕಗಳನ್ನು ಪರಿಶೀಲಿಸಲು ವ್ಯವಸ್ಥಾಪಕ ನಿರ್ದೇಶಕರು, ಬಿ.ಎಂ.ಆರ್.ಸಿ.ಎಲ್. ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ಆದೇಶಿಸಲಾಗಿತ್ತು.<br><br>ಸದರಿ ಸಮಿತಿಯು ದಿನಾಂಕ:22.05.2019 ರಂದು ಸಲ್ಲಿಸಿರುವ ವರದಿಯಲ್ಲಿ ಬೈಕ್ ಟ್ಯಾಕ್ಸಿ ಯೋಜನೆಯನ್ನು ಜಾರಿಗೊಳಿಸುವುದು ಕಾರ್ಯಸಾಧು ಆಗಿರುವುದಿಲ್ಲವೆಂದು ವರದಿಯನ್ನು ಸಲ್ಲಿಸಿತ್ತು.<br><br>ಏತನ್ಮಧ್ಯೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 160 ಟಿಡಿಓ 2020, ದಿನಾಂಕ:14.07.2021 ರಲ್ಲಿ ಸಾರ್ವಜನಿಕ |

<table>
<tr><th></th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ.</td><td>ಆರ್ಥಿಕ ತೊಂದರೆಯಲ್ಲಿರುವ ವಿದ್ಯಾರ್ಥಿಗಳು ಕಾಲೇಜು ಅವಧಿಯ ನಂತರ ಹಾಗೂ ದಿನಗೂಲಿ ನೌಕರರು ಪಾರ್ಟ್ ಟೈಮ್ ವೃತ್ತಿಯನ್ನಾಗಿ ಬೈಕ್ ಟ್ಯಾಕ್ಸಿ ಆಯ್ಕೆ ಮಾಡಿಕೊಂಡು ತಮ್ಮ ಜೀವನ ಕಟ್ಟಿಕೊಂಡಿದ್ದು, ಸೇವೆ ಸ್ಥಗಿತಗೊಳಿಸಿದ ಪರಿಣಾಮ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ಯಾವ ರೀತಿ ನೆರವಿಗೆ ಬರಲಿದೆ; (ಮಾಹಿತಿ ಒದಗಿಸುವುದು)</td><td rowspan="2">ಸಾರಿಗೆಗಾಗಿ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ಉದ್ದೇಶದಿಂದ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆಯನ್ನು ಜಾರಿಗೊಳಿಸಲಾಗಿತ್ತು. ಸದರಿ ಯೋಜನೆಯು ಬ್ಯಾಟರಿ ಚಾಲಿತ ವಿದ್ಯುತ್ ಮೋಟಾರು ಸೈಕಲ್ ಅಥವಾ ವಿದ್ಯುತ್ ಬೈಕ್‌ಗಳಿಗೆ ಮಾತ್ರ ಅನ್ವಯವಾಗತಕ್ಕದ್ದು ಎಂದು ಆದೇಶಿಸಲಾಗಿತ್ತು.<br><br>ಆದರೆ, ಕೆಲವು ಖಾಸಗಿ ಆಪ್ ಆಧಾರಿತ ಸಂಸ್ಥೆಗಳು ಮೋಟಾರು ವಾಹನ ಕಾಯ್ದೆ ಮತ್ತು ಅದರಡಿ ರಚಿತವಾದ ನಿಯಮಗಳನ್ನು ಉಲ್ಲಂಘಿಸಿ ಅನಧಿಕೃತವಾಗಿ ಸಾರಿಗೇತರ (Non-Transport) Internal Combustion Engine (ಪೆಟ್ರೋಲ್ ದ್ವಿ-ಚಕ್ರ) ವಾಹನಗಳನ್ನು ಉಪಯೋಗಿಸುತ್ತಿದ್ದರು. ಈ ಬಗ್ಗೆ ಹಲವಾರು ದೂರುಗಳು ಸಹ ಬಂದಿರುತ್ತವೆ.<br><br>ಹಾಗಾಗಿ, ಕಾನೂನಿನಲ್ಲಿ ಪೆಟ್ರೋಲ್ ದ್ವಿ-ಚಕ್ರ ವಾಹನಗಳಿಗೆ ಅವಕಾಶವಿಲ್ಲದಿರುವುದರಿಂದ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 160 ಟಿಡಿಓ 2020, ದಿನಾಂಕ:06.03.2024 ರಲ್ಲಿ ರದ್ದುಗೊಳಿಸಿ ಆದೇಶಿಸಲಾಗಿದೆ.<br><br>ಪ್ರಶ್ನೆ ಸಂಖ್ಯೆ (ಅ) ರಲ್ಲಿ ವಿವರಿಸಿರುವಂತೆ ಬೈಕ್ ಟ್ಯಾಕ್ಸಿ ಸೇವೆಯ ಸಂಬಂಧ ಮಾನ್ಯ ಉಚ್ಛ ನ್ಯಾಯಾಲಯದ ದ್ವಿ-ಸದಸ್ಯ ಪೀಠದ ಮುಂದೆ ಪ್ರಕರಣಗಳು ವಿಚಾರಣೆಗೆ ಬಾಕಿ ಇರುತ್ತವೆ.</td></tr>
<tr><td>ಈ.</td><td>ನಗರದಲ್ಲಿ ದಿನನಿತ್ಯ ಕಚೇರಿ ಕೆಲಸಕ್ಕಾಗಿ ಹೊರಡುವ ಸಾರ್ವಜನಿಕರಿಗೆ ಸಂಚಾರ ದಟ್ಟಣೆಯಿಂದಾಗಿ ನಿಗದಿತ ಸಮಯಕ್ಕೆ, ಕಚೇರಿ ತಲುಪಲು ವರದಾನದಂತಿದ್ದ ಬೈಕ್ ಟ್ಯಾಕ್ಸಿ ಸೇವೆಯನ್ನು ಮಾನ್ಯ ಉಚ್ಛ ನ್ಯಾಯಾಲಯವು ನೀಡಿರುವ ಆದೇಶದಂತೆ ಮೋಟಾರ್ ವಾಹನ ಕಾಯ್ದೆಯಡಿ ನಿಯಮ ರೂಪಿಸಿ ಯಾವ ಕಾಲಮಿತಿಯಲ್ಲಿ ಪುನರಾರಂಭಿಸಲಾಗುವುದು? (ವಿವರ ನೀಡುವುದು)</td></tr>
</table>

**ಟಿಡಿ 59 ಟಿಡಿಕ್ಯೂ 2025**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು